ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 598

ಸದಸ್ಯರ ಹೆಸರು : ಶ್ರೀ ಅಲ್ಲಂ ವೀರಭದ್ರಪ್ಪ (ವಿಧಾನಸಭೆಯಿಂದ ಚುನಾಯಿತರಾದವರು)

ಉತ್ತರಿಸುವ ದಿನಾಂಕ : 24.09.2020

ಉತ್ತರಿಸುವ ಸಚಿವರು : ಮಾನ್ಯ ಜಲಸಂಪನ್ಮೂಲ ಸಚಿವರು

ಕ್ರ.ಸಂ.	ಪ್ರಶ್ನೆ	ಉತ್ತರ
ಅ)	ತುಂಗಭದ್ರಾ ಜಲಾಶಯದಲ್ಲಿ ಮಳೆಗಾಲದಲ್ಲಿ ನೀರು ತುಂಬಿ ಹರಿಯುತ್ತಿರುವುದರಿಂದ ನವಲಿಯ ಹತ್ತಿರ ಸಮಾನಾಂತರ ಡ್ಯಾಂ ನಿರ್ಮಿಸಲು ಈಗಾಗಲೇ ಡಿ.ಪಿ.ಆರ್. ಆಗಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ;	2020-21ರ ಸಾಲಿನ ಆಯವ್ಯಯದಲ್ಲಿ ತುಂಗಭದ್ರಾ ಜಲಾಶಯದಲ್ಲಿ ಹೂಳಿನಿಂದ ಉಂಟಾದ ನೀರಿನ ಸಾಮರ್ಥ್ಯದ ಕೊರತೆಯನ್ನು ನೀಗಿಸಲು ಪರ್ಯಾಯ ಹರಿವು ನಾಲೆ ಮೂಲಕ ನವಲಿ ಹತ್ತಿರ ಸಮತೋಲನಾ ಜಲಾಶಯ ನಿರ್ಮಿಸುವ ಯೋಜನೆಯ ವಿವರವಾದ ಯೋಜನಾ ವರದಿಯನ್ನು ತಯಾರಿಸುವ ಕಾಮಗಾರಿಗೆ ರೂ. 20.00 ಕೋಟಿ ಅನುದಾನವನ್ನು ಒದಗಿಸುವ ಬಗ್ಗೆ ಘೋಷಣೆಯಾಗಿರುತ್ತದೆ. ಸದರಿ ಯೋಜನೆಗೆ ಸಂಬಂಧಿಸಿದಂತೆ ಸರ್ವೇ ಸಮೀಕ್ಷೆ ಕೈಗೊಳ್ಳಲು ರೂ. 14.30 ಕೋಟಿ ಮೊತ್ತದ ಅಂದಾಜಿಗೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ.
ಆ)	ಹಾಗಿದಲ್ಲಿ, ಇದಕ್ಕಾಗಿ ನಿಗಧಿಪಡಿಸಿದ ಅನುದಾನವೆಷ್ಟು ಮತ್ತು ಬಿಡುಗಡೆ ಮಾಡಿದ ಅನುದಾನವೆಷ್ಟು;	
ಇ)	ಸದರಿ ಕಾಮಗಾರಿ ಯಾವ ಹಂತದಲ್ಲಿದೆ?	ಸರ್ವೇ ಕನ್ಸಲ್ಟೆನ್ಸಿ ಕಾಮಗಾರಿಯ ಟೆಂಡರ್ ಪ್ರಕ್ರಿಯೆ ಜಾರಿಯಲ್ಲಿರುತ್ತದೆ.

ಸಂಖ್ಯೆ:ಜಸಂಇ 125 ಎಂಎಲ್‌ಎ 2020

(ರಮೇಶ್ ಲ. ಜಾರಕಿಹೊಳಿ)
ಜಲಸಂಪನ್ಮೂಲ ಸಚಿವರು